**All India Radio: Bangalore**
**National Bulletin In Kannada**
**09.09.2025 1.10 pm.**

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**ಮುಖ್ಯಾಂಶಗಳು :**

೧. ಉಪರಾಷ್ಟ್ರಪತಿ ಚುನಾವಣೆ; ಪ್ರಧಾನಿ, ಸಚಿವರು ಸೇರಿದಂತೆ ಸಂಸದರಿಂದ ಮತ ಚಲಾವಣೆ

೨. ಪ್ರವಾಹ ಪರಿಸ್ಥಿತಿ ಪರಿಶೀಲನೆಗೆ ಹಿಮಾಚಲಪ್ರದೇಶ, ಪಂಜಾಬ್‌ಗೆ ಇಂದು ಪ್ರಧಾನಿ ಭೇಟಿ; ಸಂತ್ರಸ್ತರಿಗೆ ಕೇಂದ್ರ ಸರ್ಕಾರದ ನೆರವಿನ ಭರವಸೆ

೩. ಭಾರತ ಭೇಟಿಯ ಭಾಗವಾಗಿ ಮುಂಬೈಗೆ ಆಗಮಿಸಿದ ಮಾರಿಷಸ್ ಪ್ರಧಾನಿ

೪. ೧೭ನೇ ಏಷ್ಯಾ ಕಪ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಗೆ ಅಬುದಾಭಿಯಲ್ಲಿಂದು ಚಾಲನೆ; ನಾಳೆಯಿಂದ ಭಾರತದ ಅಭಿಯಾನ ಆರಂಭ

೫. ಚೀನಾದಲ್ಲಿಂದು ಹಾಂಕಾಂಗ್ ಓಪನ್ ಬ್ಯಾಡ್ಮಿಂಟನ್ ಟೂರ್ನಿಗೆ ಚಾಲನೆ

*><><><*><><><*

ಉಪರಾಷ್ಟ್ರಪತಿ ಸ್ಥಾನಕ್ಕೆ ನಡೆಯುತ್ತಿರುವ ಚುನಾವಣೆಯ ಮತದಾನ ಪ್ರಕ್ರಿಯೆ ಪ್ರಗತಿಯಲ್ಲಿದೆ. ಮತದಾನ ನೂತನ ಸಂಸತ್ ಭವನದಲ್ಲಿ ಬೆಳಿಗ್ಗೆ ೧೦ ಗಂಟೆಗೆ ಆರಂಭವಾಗಿದ್ದು, ಸಂಜೆ ೫ ಗಂಟೆವರೆಗೆ ಮುಂದುವರಿಯಲಿದೆ. ಎನ್‌ಡಿಎ ಅಭ್ಯರ್ಥಿಯಾಗಿ ಮಹಾರಾಷ್ಟ್ರ ರಾಜ್ಯಪಾಲರಾದ ಸಿ.ಪಿ. ರಾಧಾಕೃಷ್ಣನ್ ಹಾಗೂ ಐಎನ್‌ಡಿಐ ಮೈತ್ರಿಕೂಟದ ಅಭ್ಯರ್ಥಿಯಾಗಿ ಸುಪ್ರೀಂಕೋರ್ಟ್‌ನ ಮಾಜಿ ನ್ಯಾಯಾಮೂರ್ತಿ ಬಿ. ಸುದರ್ಶನ ರೆಡ್ಡಿ ಕಣದಲ್ಲಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ, ಕೇಂದ್ರ ಸಚಿವರಾದ ರಾಜನಾಥ್ ಸಿಂಗ್, ಅಶ್ವಿನಿ ವೈಷ್ಣವ್, ಜಿತೇಂದ್ರ ಸಿಂಗ್, ಪ್ರಲ್ಹಾದ್ ಜೋಶಿ, ರಾಜ್ಯಸಭಾ ಉಪಸಭಾಪತಿ ಹರಿವಂಶ್, ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ, ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಹಿರಿಯ ಕಾಂಗ್ರೆಸ್ ಸಂಸದೆ ಸೋನಿಯಾ ಗಾಂಧಿ, ಡಿಎಂಕೆ ಸಂಸದ ದಯಾನಿಧಿ ಮಾರನ್, ಸಮಾಜವಾದಿ ಪಕ್ಷದ ರಾಮ್‌ಗೋಪಾಲ್ ಯಾದವ್, ಜೆಡಿಯುನ ಸಂಜಯ್ ಝಾ ಈಗಾಗಲೇ ಮತಚಲಾಯಿಸಿದ್ದು, ಲೋಕಸಭೆ ಮತ್ತು ರಾಜ್ಯಸಭೆಯ ಇತರ ಸದಸ್ಯರು ತಮ್ಮ ಮತವನ್ನು ಚಲಾಯಿಸುತ್ತಿದ್ದಾರೆ. ಮತ ಎಣಿಕೆ ಪ್ರಕ್ರಿಯೆ ಸಂಜೆ ೬ ಗಂಟೆಯ ನಂತರ ಆರಂಭವಾಗಲಿದೆ. ಉಪರಾಷ್ಟ್ರಪತಿಯನ್ನು ಎರಡು ಸದನಗಳ ಸದಸ್ಯರ ಮೂಲಕ ಆಯ್ಕೆ ಮಾಡಲಾಗುತ್ತದೆ. ಮತದಾರರು ತಮ್ಮ ವೈಯಕ್ತಿಕ ಆಯ್ಕೆಯ ಮೇರೆಗೆ ಮತಹಾಕಬಹುದು ಮತ್ತು ಯಾವುದೇ ಪಕ್ಷದ ವಿಪ್‌ಗೆ ಒಳಪಡುವ ಅಗತ್ಯವಿಲ್ಲ. ಉಪರಾಷ್ಟ್ರಪತಿ ಚುನಾವಣೆಯಲ್ಲಿ ಪ್ರತಿ ಮತಕ್ಕೂ ಸಮಾನ ಮೌಲ್ಯವಿದೆ. ಪ್ರಸ್ತುತ ಲೋಕಸಭೆಯಲ್ಲಿ ೫೪೨ ಮತ್ತು ರಾಜ್ಯಸಭೆಯಲ್ಲಿ ೨೩೯ ಸದಸ್ಯರಿದ್ದಾರೆ. ಒಟ್ಟು ಮತದಾರರ ಸಂಖ್ಯೆ ೭೮೧ ಆಗಿದ್ದು, ೩೯೧ ಬಹುಮತದ ಸಂಖ್ಯೆಯಾಗಿದೆ. ಈ ಬಾರಿ ಮೊದಲ ಬಾರಿಗೆ ಉಪರಾಷ್ಟ್ರಪತಿ ಚುನಾವಣೆ ಹೊಸ ಸಂಸತ್ ಭವನದಲ್ಲಿ ನಡೆಯುತ್ತಿದೆ. ಜುಲೈ ತಿಂಗಳಲ್ಲಿ ಮಾಜಿ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ರಾಜೀನಾಮೆ ನೀಡಿದ ಹಿನ್ನೆಲೆಯಲ್ಲಿ ಚುನಾವಣೆ ನಡೆಸುತ್ತಿದೆ.

*><><><*><><><*

ಪ್ರಧಾನಿ ನರೇಂದ್ರ ಮೋದಿ ಅವರಿಂದು ಹಿಮಾಚಲಪ್ರದೇಶ ಮತ್ತು ಪಂಜಾಬ್‌ಗೆ ಭೇಟಿ ನೀಡಲಿದ್ದು, ಪ್ರವಾಹ ಪರಿಸ್ಥಿತಿಯನ್ನು ಪರಿಶೀಲಿಸಿ, ಪರಿಹಾರ ಮತ್ತು ಪುನರ್ವಸತಿ ಕಾರ್ಯಗಳ ಪರಿಶೀಲನೆ ನಡೆಸಲಿದ್ದಾರೆ. ತಮ್ಮ ಪ್ರವಾಸದ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡಿರುವ ಪ್ರಧಾನಿ, ಕೇಂದ್ರ ಸರ್ಕಾರ ವಿಪತ್ತಿನಿಂದ ಸಂತ್ರಸ್ತರಾದ ಎಲ್ಲರೊಂದಿಗೆ ನಿಂತಿದೆ ಎಂದು ತಿಳಿಸಿದ್ದಾರೆ. ಪ್ರಧಾನಮಂತ್ರಿ ಇಂದು ಹಿಮಾಚಲ ಪ್ರದೇಶದ ಕಾಂಗ್ರಾ ಜಿಲ್ಲೆಯ ಧರ್ಮಶಾಲೆಗೆ ತೆರಳಲಿದ್ದಾರೆ. ಧರ್ಮಶಾಲಾದಲ್ಲಿ ಅವರು ರಾಜ್ಯ ಸರ್ಕಾರದ ಅಧಿಕಾರಿಗಳೊಂದಿಗೆ ಉನ್ನತ ಮಟ್ಟದ ಸಮೀಕ್ಷಾ ಸಭೆ ನಡೆಸಲಿದ್ದು, ವಿಪತ್ತಿನಿಂದ ಬಳಲುತ್ತಿರುವ ಸ್ಥಳೀಯ ನಿವಾಸಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ಅಲ್ಲದೆ, ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯಾ ಪಡೆ, ರಾಜ್ಯ ವಿಪತ್ತು ಪ್ರತಿಕ್ರಿಯಾ ಪಡೆ ಮತ್ತು ಆಪದಾ ಮಿತ್ರ ತಂಡದ ಸಿಬ್ಬಂದಿಯನ್ನು ಭೇಟಿಯಾಗಲಿದ್ದಾರೆ. ಇದರ ಜೊತೆಗೆ ಪ್ರಧಾನಿ, ಹಿಮಾಚಲ ಪ್ರದೇಶದ ಪ್ರವಾಹ ಹಾಗೂ ಭೂಕುಸಿತ ಪೀಡಿತ ಪ್ರದೇಶಗಳ ವೈಮಾನಿಕ ಸಮೀಕ್ಷೆ ನಡೆಸಲಿದ್ದಾರೆ. ಹಿಮಾಚಲ ಪ್ರದೇಶದ ಪ್ರವಾಸದ ನಂತರ, ಪ್ರಧಾನಿ, ಪಂಜಾಬ್‌ನ ಪ್ರವಾಹಪೀಡಿತ ಪ್ರದೇಶಗಳ ವೈಮಾನಿಕ ಸಮೀಕ್ಷೆ ನಡೆಸಲಿದ್ದಾರೆ. ಅವರು ಸಂಜೆ ಗುರ್ದಾಸ್‌ಪುರ್‌ಗೆ ತೆರಳಿ, ಹಿರಿಯ ಅಧಿಕಾರಿಗಳೊಂದಿಗೆ, ಪರಿಸ್ಥಿತಿಯ ಬಗ್ಗೆ ಪರಿಶೀಲನಾ ಸಭೆ ನಡೆಸಲಿದ್ದಾರೆ. ಗುರ್ದಾಸ್‌ಪುರ್‌ನಲ್ಲಿ ಪ್ರವಾಹ ಸಂತ್ರಸ್ತರ ಹಾಗೂ ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್ ಮತ್ತು ಆಪದಾ ಮಿತ್ರ ತಂಡದ ಸದಸ್ಯರೊಂದಿಗೆ ಸಂವಾದ ನಡೆಸಲಿದ್ದಾರೆ.

*><><><*><><><*

ಉತ್ತರ ಪ್ರದೇಶದ ಪ್ರಯಾಗರಾಜ್, ಆಗ್ರಾ ಮತ್ತು ಮಥುರಾ ಜಿಲ್ಲೆಗಳಲ್ಲಿ ಪ್ರವಾಹ ಪರಿಸ್ಥಿತಿ ಇನ್ನೂ ಗಂಭೀರವಾಗಿಯೇ ಮುಂದುವರಿದಿದೆ. ಜಿಲ್ಲಾಡಳಿತದ ಆದೇಶದಂತೆ ಶಾಲೆಗಳು ಮತ್ತು ಕಾಲೇಜುಗಳು ಮುಚ್ಚಲ್ಪಟ್ಟಿವೆ.

ಮಥುರಾದಲ್ಲಿ ಕನಿಷ್ಠ ೫ ಸಾವಿರಕ್ಕೂ ಹೆಚ್ಚು ಮಂದಿ ಪರಿಹಾರ ಶಿಬಿರಗಳಲ್ಲಿ ಆಶ್ರಯ ಪಡೆದುಕೊಂಡಿದ್ದಾರೆ. ಪ್ರಸಿದ್ಧ ಬಂಕೆ ಬಿಹಾರಿ ದೇವಾಲಯಕ್ಕೆ ಹೋಗುವ ಮಾರ್ಗವು ನೀರಿನಲ್ಲಿ ಮುಳುಗಿದೆ. ಆಗ್ರಾದಲ್ಲೂ ಯಮುನಾ ನದಿ ನೀರು ತಾಜ್‌ಮಹಲ್ ಆವರಣ ಪ್ರವೇಶಿಸಿದ್ದು, ಇತರ ತಗ್ಗು ಪ್ರದೇಶಗಳಿಗೂ ನುಗ್ಗಿದೆ. ಮತ್ತೊಂದೆಡೆ ಪ್ರಯಾಗ್‌ರಾಜ್ ಜಿಲ್ಲೆಯ ಹಲವು ಭಾಗಗಳು ಗಂಗೆ ಮತ್ತು ಯಮುನೆಯ ನೀರಿನಲ್ಲಿ ಮುಳುಗಡೆಯಾಗಿವೆ.

*><><><*><><><*

ಇಂದಿನಿಂದ ಎಂಟು ದಿನಗಳ ಭಾರತ ಭೇಟಿಯ ಭಾಗವಾಗಿ ಮಾರಿಷಸ್ ಪ್ರಧಾನಿ ಡಾ. ನವೀನ್‌ಚಂದ್ರ ರಾಮಗೂಲಂ ಮತ್ತು ಅವರ ಪತ್ನಿ ವೀಣಾ ರಾಮಗೂಲಂ ಇಂದು ಮುಂಬೈಗೆ ಆಗಮಿಸಿದ್ದಾರೆ. ಪ್ರಧಾನಿ ರಾಮಗೂಲಂ ಅವರ ಪ್ರಸ್ತುತ ಅಧಿಕಾರಾವಧಿಯಲ್ಲಿ ಭಾರತಕ್ಕೆ ನೀಡುತ್ತಿರುವ ಮೊದಲ ದ್ವಿಪಕ್ಷೀಯ ಭೇಟಿ ಇದಾಗಿದೆ. ಅವರು ಈ ಹಿಂದೆ ೨೦೧೪ರ ಮೇ ತಿಂಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ಭಾಗವಹಿಸಲು ಭಾರತಕ್ಕೆ ಭೇಟಿ ನೀಡಿದ್ದರು. ಭಾರತ ಭೇಟಿಯ ಸಮಯದಲ್ಲಿ, ಪ್ರಧಾನಿ ರಾಮಗೂಲಂ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಲಿದ್ದು, ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಹೆಚ್ಚಿಸುವ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಚರ್ಚೆ ನಡೆಸಲಿದ್ದಾರೆ. ಪ್ರವಾಸದ ಭಾಗವಾಗಿ ಡಾ. ರಾಮಗೂಲಂ ಮುಂಬೈ, ವಾರಣಾಸಿ, ಅಯೋಧ್ಯೆ ಮತ್ತು ತಿರುಪತಿಗೂ ಭೇಟಿ ನೀಡಲಿದ್ದಾರೆ.

*><><><*><><><*

ಆಪರೇಷನ್ ಸಿಂದೂರ್ ಕಾರ್ಯಾಚರಣೆ ವೇಳೆ ಎಲ್ಲಾ ಭಾರತೀಯ ಉಪಗ್ರಹಗಳು ದಿನವಿಡೀ ಕಾರ್ಯನಿರ್ವಹಿಸಿದ್ದು, ಅಗತ್ಯತೆಗಳನ್ನು ಪೂರೈಸಿವೆ ಎಂದು ಇಸ್ರೋ ಅಧ್ಯಕ್ಷ ವಿ. ನಾರಾಯಣನ್ ಹೇಳಿದ್ದಾರೆ. ನವದೆಹಲಿಯಲ್ಲಿ ಕಾರ್ಯಕ್ರಮ ಒಂದರಲ್ಲಿ ಮಾತನಾಡಿದ ಅವರು, ಭಾರತದ ತಾಂತ್ರಿಕತೆ, ತಂತ್ರಜ್ಞಾನ ವರ್ಗಾವಣೆಗೆ ಇಸ್ರೋ ಯಾವ ರೀತಿ ಬಲ ನೀಡುತ್ತಿದೆ ಎಂಬುದನ್ನು ವಿವರಿಸಿದರು. ಇದರ ಜೊತೆಗೆ ಬಾಹ್ಯಾಕಾಶ ಉದ್ಯಮಕ್ಕೆ ಉತ್ತೇಜನ ನೀಡುವ ಮೂಲಕ ಜಾಗತಿಕ ಬಾಹ್ಯಾಕಾಶ ಕ್ಷೇತ್ರದಲ್ಲಿ ಭಾರತವನ್ನು ಮುಂಚೂಣಿಯಲ್ಲಿಡುವಲ್ಲಿ ಇಸ್ರೋ ನಿರ್ವಹಿಸುತ್ತಿರುವ ಪಾತ್ರದ ಕುರಿತು ತಿಳಿಸಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಸೇನಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ಭಾರತೀಯ ಸೇನೆ, ಭದ್ರತೆ ಮತ್ತು ರಾಷ್ಟ್ರೀಯ ಸ್ವಾವಲಂಬನೆಗೆ ಒತ್ತು ನೀಡುತ್ತಿರುವ ಜೊತೆಗೆ ಸ್ಥಳೀಯ ರಕ್ಷಣಾ ಉತ್ಪಾದನೆ, ರಫ್ತು ಮತ್ತು ನಾವಿನ್ಯತೆಗೆ ಉತ್ತೇಜನ ನೀಡುವ ಮೂಲಕ ಅಭಿವೃದ್ಧಿಗೆ ಬಲ ನೀಡುತ್ತಿದೆ ಎಂದರು. ಎದುರಾಳಿ ತಂತ್ರಜ್ಞಾನವನ್ನು ನಿರಂತರವಾಗಿ ಉನ್ನತೀಕರಿಸುತ್ತಿರುವ ಬೆನ್ನಲ್ಲೇ ನಮ್ಮ ಗುರಿಗಳು ನಿರಂತರವಾಗಿ ಬದಲಾಗುತ್ತಿರುತ್ತವೆ. ಎದುರಾಳಿಗಿಂತಲೂ ಉನ್ನತ ಮಟ್ಟದ ತಂತ್ರಜ್ಞಾನವನ್ನು ಹೊಂದಿರುವುದನ್ನು ನಾವು ಖಚಿತಪಡಿಸಿಕೊಳ್ಳಬೇಕು ಎಂದು ಹೇಳಿದರು.

*><><><*><><><*

ಕೇರಳದಲ್ಲಿ ರಾಜ್ಯಮಟ್ಟದ ಅಧಿಕೃತ ಓಣಂ ಸಂಭ್ರಮಾಚರಣೆಗೆ ಇಂದು ಸಂಜೆ ತೆರೆ ಬೀಳಲಿದೆ. ಕೇರಳ ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಇಂದು ಸಂಜೆ ಆಚರಣೆಯ ಸಮಾರೋಪವಾಗಿ ಸಾಂಸ್ಕೃತಿಕ ರ‍್ಯಾಲಿಯೊಂದಕ್ಕೆ ಚಾಲನೆ ನೀಡಲಿದ್ದಾರೆ.

*><><><*><><><*

ನೇಪಾಳದಲ್ಲಿ ಸಾಮಾಜಿಕ ಜಾಲತಾಣಗಳ ನಿಷೇಧದ ವಿರುದ್ಧ ಯುವಕರ ನೇತೃತ್ವದಲ್ಲಿ ನಡೆದ ಪ್ರತಿಭಟನೆ ಗಲಭೆಯ ರೂಪ ಪಡೆದುಕೊಂಡಿದ್ದು, ಕನಿಷ್ಠ ೧೯ ಮಂದಿ ಪ್ರಾಣ ಕಳೆದುಕೊಂಡಿದ್ದಾರೆ ಹಾಗೂ ೩೪೦ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಸೆಪ್ಟೆಂಬರ್ ೪ ರಿಂದ ಜಾರಿಗೆ ಬಂದಿರುವ ಈ ನಿಷೇಧವು ನೋಂದಾಯಿತವಲ್ಲದ ಫೇಸ್‌ಬುಕ್, ಇನ್‌ಸ್ಟಾಗ್ರಾಂ, ಎಕ್ಸ್ ಮತ್ತು ಯೂಟ್ಯೂಬ್ ವೇದಿಕೆಗಳನ್ನು ನಿರ್ಬಂಧಿಸುತ್ತದೆ.

*><><><*><><><*

೧೭ನೇ ಏಷ್ಯಾಕಪ್ ಕ್ರಿಕೆಟ್ ಪಂದ್ಯಾವಳಿ ಅಬುಧಾಬಿಯಲ್ಲಿಂದು ಆರಂಭವಾಗಲಿದೆ. ಉದ್ಘಾಟನಾ ಪಂದ್ಯದಲ್ಲಿ ಅಫ್ಘಾನಿಸ್ತಾನ ಮತ್ತು ಹಾಂಗ್‌ಕಾಂಗ್ ತಂಡಗಳು ಮುಖಾಮುಖಿಯಾಗಲಿದ್ದು, ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಸೆಪ್ಟೆಂಬರ್ ೨೮ರವರೆಗೆ ನಡೆಯುವ ಈ ಟೂರ್ನಿಯಲ್ಲಿ ಎಂಟು ತಂಡಗಳು ಪ್ರಶಸ್ತಿಗಾಗಿ ಸೆಣಸಾಟ ನಡೆಸಲಿವೆ. ಈ ಬಾರಿ ಟಿ-೨೦ ಮಾದರಿಯಲ್ಲಿ ಪಂದ್ಯಾವಳಿ ನಡೆಯುತ್ತಿದೆ. ಇದು ಮುಂದಿನ ವರ್ಷ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಸಿದ್ಧತೆಗೆ ನಿರ್ಣಾಯಕವಾಗಿದೆ. ಭಾರತೀಯ ತಂಡ ನಾಳೆ ತನ್ನ ಅಭಿಯಾನ ಆರಂಭಿಸಲಿದ್ದು, ದುಬೈನಲ್ಲಿ ನಡೆಯಲಿರುವ ಎ ಗುಂಪಿನ ಪಂದ್ಯದಲ್ಲಿ ಆತಿಥೇಯ ಯುಎಇ ತಂಡವನ್ನು ಎದುರಿಸಲಿದೆ. ಭಾರತ - ಯುಎಇ ಪಾಕಿಸ್ತಾನ ಮತ್ತು ಒಮನ್ ತಂಡಗಳು ಎ ಗುಂಪಿನಲ್ಲಿವೆ. ಇದೇ ೧೪ರಂದು ಭಾರತ ತನ್ನ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನದ ವಿರುದ್ಧ ಸೆಣಸಾಟ ನಡೆಸಲಿದೆ. ಒಟ್ಟು ಇರುವ ಎರಡು ಗುಂಪುಗಳ ಅಗ್ರ ಎರಡು ತಂಡಗಳು ಸೂಪರ್-೪ರ ಹಂತ ಪ್ರವೇಶಿಸಲಿವೆ. ಈ ತಂಡಗಳು ಫೈನಲ್‌ಗೆ ಅರ್ಹತೆ ಪಡೆಯಲು ತಲಾ ಮೂರು ಪಂದ್ಯಗಳನ್ನು ಆಡಲಿವೆ.

*><><><*><><><*

ಚೀನಾದಲ್ಲಿಂದು ೨೦೨೫ರ ಹಾಂಗ್ ಕಾಂಗ್ ಓಪನ್ ಬ್ಯಾಡ್ಮಿಂಟನ್ ಟೂರ್ನಿಗೆ ಚಾಲನೆ ದೊರೆಯಲಿದೆ. ಎರಡು ಬಾರಿಯ ಒಲಿಂಪಿಕ್ ಪದಕ ವಿಜೇತೆ ಪಿ.ವಿ. ಸಿಂಧು ತಮ್ಮ ಮೊದಲ ಸುತ್ತಿನ ಪಂದ್ಯದಲ್ಲಿ ಡೆನ್ಮಾರ್ಕ್‌ನ ಲೈನ್ ಕ್ರಿಸ್ಟೋಫರ್ಸನ್ ವಿರುದ್ಧ ಕಣಕ್ಕಿಳಿಯಲಿದ್ದಾರೆ. ಪುರುಷರ ಸಿಂಗಲ್ಸ್ ವಿಭಾಗದಲ್ಲಿ, ಲಕ್ಷ್ಯ ಸೇನ್, ಉತ್ತಮ ಪ್ರದರ್ಶನ ನೀಡುವ ನಿರೀಕ್ಷೆಯಲ್ಲಿದ್ದಾರೆ. ಅವರ ಜೊತೆಗೆ ಎಚ್.ಎಸ್. ಪ್ರಣಯ್ ಹಾಗೂ ಆಯುಷ್ ಶೆಟ್ಟಿ ಕೂಡ ಈ ವಿಭಾಗದಲ್ಲಿ ಸ್ಪರ್ಧಿಸುತ್ತಿದ್ದಾರೆ. ಮಾಜಿ ವಿಶ್ವ ಅಗ್ರ

ಶ್ರೇಯಾಂಕಿತ ಆಟಗಾರ ಕಿಡಂಬಿ ಶ್ರೀಕಾಂತ್, ಟೂರ್ನಿಯ ಅರ್ಹತಾ ಸುತ್ತಿನಲ್ಲಿ ಭಾರತದವರೇ ಆದ ತರುಣ್ ಮಣ್ಣೇಪಳ್ಳಿ ವಿರುದ್ಧ ಸೆಣಸಾಟ ನಡೆಸಲಿದ್ದಾರೆ. ಪುರುಷರ ಡಬಲ್ಸ್ ವಿಭಾಗದಲ್ಲಿ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಕಣಕ್ಕಿಳಿಯಲಿದ್ದಾರೆ. ಭಾರತದ ಹರಿಹರನ್ ಮತ್ತು ರೂಬನ್ ಕುಮಾರ್ ಜೋಡಿ ಕೂಡ ಟೂರ್ನಿಯಲ್ಲಿ ಸ್ಪರ್ಧಿಸುತ್ತಿದೆ. ಮಿಶ್ರ ಡಬಲ್ಸ್ ವಿಭಾಗದಲ್ಲಿ ಧ್ರುವ್ ಕಪಿಲಾ-ತನಿಷಾ ಕ್ರಾಸ್ಟೋ ಹಾಗೂ ರೋಹನ್ ಕಪೂರ್-ರುತ್ವಿಕಾ ಗಡ್ಡೆ ಜೋಡಿ ಭಾರತದ ಪರವಾಗಿ ಕಣಕ್ಕಿಳಿಯಲಿದ್ದಾರೆ.

*><><><*><><><*

ತಜಕಿಸ್ತಾನದ ಹಿಸೋರ್ ಸೆಂಟ್ರಲ್ ಕ್ರೀಡಾಂಗಣದಲ್ಲಿ ನಡೆದ ಸಿಎಎಫ್ಎ ನೇಷನ್ಸ್ ಕಪ್ ೨೦೨೫ ಫುಟ್‌ಬಾಲ್ ಪಮದ್ಯದಲ್ಲಿ, ಭಾರತ ಒಮಾನ್ ತಂಡವನ್ನು ಸೋಲಿಸಿ ಮೂರನೇ ಸ್ಥಾನ ಗಳಿಸುವ ಮೂಲಕ ಕಂಚಿನ ಪದಕ ಗೆದ್ದಿದೆ. ಉದಾಂತ ಸಿಂಗ್ ಭಾರತದ ಪರ ಸಮಬಲ ಸಾಧಿಸಿದ ನಂತರ ಪಂದ್ಯ ನಿಗದಿತ ಸಮಯದಲ್ಲಿ ೧-೧ ಅಂತರದಲ್ಲಿ ಕೊನೆಗೊಂಡಿತು. ಪೆನಾಲ್ಟಿ ಶೂಟೌಟ್‌ನಲ್ಲಿ ಒಮಾನ್ ವಿರುದ್ಧ ಭಾರತ ೩-೨ ಅಂತರದಲ್ಲಿ ಗೆದ್ದಿತು. ಅಂತರರಾಷ್ಟ್ರೀಯ ಫುಟ್‌ಬಾಲ್ ಪಂದ್ಯದಲ್ಲಿ ಭಾರತವು ಮಾದಲ ಬಾರಿಗೆ ಒಮಾನ್ ತಂಡವನ್ನು ಸೋಲಿಸಿದೆ.

*><><><*><><><*

ಫ್ರಾನ್ಸ್‌ನ ಪ್ರಧಾನಿ ಫ್ರಾಂಸುವಾ ಬೈರೂ ಸಂಸತ್ತಿನಲ್ಲಿ ನಡೆದ ವಿಶ್ವಾಸ ಮತದಲ್ಲಿ ಸೋಲು ಅನುಭವಿಸಿದ್ದು, ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುವುದು ಅನಿವಾರ್ಯವಾಗಿದೆ. ಬೈರೂ ಕಳೆದ ೧೨ ತಿಂಗಳಲ್ಲಿ ಪ್ರಧಾನಿಯ ಸ್ಥಾನಕ್ಕೆ ನೇಮಕವಾದ ಮೂರನೇ ರಾಜಕಾರಣಿಯಾಗಿದ್ದು, ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರೋನ್ ತಮ್ಮ ಸರ್ಕಾರವನ್ನು ಸ್ಥಿರಗೊಳಿಸಲು ಪ್ರಯತ್ನಿಸುತ್ತಿದ್ದಾರೆ.

*><><><*><><><*